ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 012. ದೂರವಾಣಿ: 080–23 460 460 (5 ಲೈನ್‌ಗಳು)

ಫ್ಯಾಕ್ಸ್: 080–23461576 ಇ–ಮೇಲ್: keauthority-ka@nic.in ವೆಬ್‌ಸೈಟ್: http://kea.kar.nic.in


**ಸಂ: ಇಡಿ/ಕೆಇಎ/ಆಡಳಿತ/ಸಿ.ಆರ್–12/2020–21** **ದಿನಾಂಕ: 20–01–2021**

## ಅಧಿಸೂಚನೆ

## ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ ಸ್ನಾತಕೋತ್ತರ ಕೋರ್ಸುಗಳ ಪ್ರವೇಶ 2020–21 (ಪಿಜಿಆಯುಷ್)

ಆಯುಷ್ ಸಚಿವಾಲಯ, ನವದೆಹಲಿ ಇವರ ಮಾರ್ಗದರ್ಶಿ ಸೂತ್ರಗಳ ಅನ್ವಯ, ಸರ್ಕಾರವು ತನ್ನ ಆದೇಶ ಸಂಖ್ಯೆ ಆಕುಕ 70 ಪಿಟಿಡಿ 2017 ಬೆಂಗಳೂರು ದಿನಾಂಕ 06–09–2017 ರಲ್ಲಿ ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ All India Ayush Post Graduate Entrance Test (AIAPGET-2020) ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಅನ್ನು ನಡೆಸಲು ಪ್ರಾಧಿಕಾರಕ್ಕೆ ಆದೇಶಿಸಿದೆ.

ಹಾಗು ಕೇಂದ್ರ ಸರ್ಕಾರದ ಆಯುಷ್ ಸಚಿವಾಲಯದ ಪತ್ರ ಸಂಖ್ಯೆ L-11011/2/2020-E-P(1) Part-2 ದಿನಾಂಕ 10–12–2020 ರ ಅನ್ವಯ ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ಕಾಲೇಜುಗಳಲ್ಲಿ 15% ಅಖಿಲ ಭಾರತ ಕೋಟದ ಸೀಟುಗಳನ್ನೂ ಸಹ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಮೆರಿಟ್ ಆಧಾರದ ಮೇಲೆ ಹಂಚಿಕೆ ಮಾಡಲಾಗುವುದು. ಸದರಿ ಸೀಟುಗಳು ಮುಕ್ತ ಸೀಟುಗಳಾಗಿರುತ್ತದೆ.

AIAPGET - 2020 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಂದ ಸರ್ಕಾರವು ನಿಗದಿಪಡಿಸುವ 2020ನೇ ಸಾಲಿನ ಸ್ನಾತಕೋತ್ತರ ಆಯುಷ್ ಸೀಟುಗಳ / ಕೋರ್ಸುಗಳ ಪ್ರವೇಶಕ್ಕಾಗಿ ಪ್ರಾಧಿಕಾರವು ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಿದೆ. ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು **ದಿನಾಂಕ 22–01–2021 ರ ಬೆ.11.00 ರಿಂದ 25–01–2021 ರ ಸಂ. 5.30 ರೊಳಗೆ** ಆನ್‌ಲೈನ್ ಮೂಲಕ ಕಡ್ಡಾಯವಾಗಿ ಅರ್ಜಿಯನ್ನು ಸಲ್ಲಿಸಬೇಕು. ನೋಂದಣಿ ಶುಲ್ಕ, Rs.2,000/- (Rs.1000/- for SC/ST and Cat-I of Karnataka) ದಿನಾಂಕ 27–01–2021 ರೊಳಗೆ ಆನ್‌ಲೈನ್ ಮೂಲಕ ಪಾವತಿಸಬೇಕು.

ವೇಳಾಪಟ್ಟಿ, ದಾಖಲಾತಿ ಪರಿಶೀಲನೆಗೆ ಮೂಲ ದಾಖಲಾತಿಗಳನ್ನು ಸಲ್ಲಿಸಬೇಕಾದ ವಿವರಗಳು ಮತ್ತು ಇನ್ನಿತರ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in**ನಲ್ಲಿ ನೋಡಲು ಸೂಚಿಸಿದೆ.

AIAPGET - 2020 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳು ಮತ್ತು ಇತರೆ ಮಾಹಿತಿಗಳನ್ನೂ ಸಹ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. SC/ST/Cat-1/2A/2B/3A/3B ಅರ್ಹತಾ ಮಾನದಂಡಗಳು ಕರ್ನಾಟಕದ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ ಎಂಬುದನ್ನು ಗಮನಿಸಿ.

ಅಭ್ಯರ್ಥಿಯ ಅರ್ಹತೆಯು ತಾತ್ಕಾಲಿಕವಾಗಿರುತ್ತದೆ ಮತ್ತು AIAPGET-2020 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳಿಗೆ ಒಳಪಟ್ಟಿರುತ್ತದೆ ಹಾಗೆಯೇ ಪ್ರವೇಶವು ಸಂಬಂಧಿಸಿದ CCIM / CCH / ಸರ್ಕಾರ / ಅರ್ಹತಾ ಪ್ರಾಧಿಕಾರ / ವಿಶ್ವವಿದ್ಯಾನಿಲಯ ಅನುಮೋದನೆಗೆ ಒಳಪಟ್ಟಿರುತ್ತದೆ. ನೋಂದಣಿ ಮಾಡುವುದರಿಂದಾಗಲೀ ಅಥವಾ ದಾಖಲಾತಿಗಳನ್ನು ಪರಿಶೀಲನೆ ಮಾಡಿಕೊಳ್ಳುವುದರಿಂದಾಗಲೀ ಕರ್ನಾಟಕದ ಆಯುಷ್ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ ಅಭ್ಯರ್ಥಿಗಳು ಯಾವುದೇ ಹಕ್ಕನ್ನು ಪಡೆಯುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in**ಗೆ ಭೇಟಿ ನೀಡಲು ಕೋರಿದೆ.

ಸಹಿ/–

**ಕಾರ್ಯನಿರ್ವಾಹಕ ನಿರ್ದೇಶಕರು.**

ವಾಸಾಸಂಇ/ಬೆಂ.ನ./ಜಿಎ/2504/2020–21

**ಕೋವಿಡ್-19 - ಗಾಳಿಸುದ್ದಿ ಹರಡಬೇಡಿ, ಜವಾಬ್ದಾರಿಯಿಂದ ವರ್ತಿಸಿ, ಸೋಂಕನ್ನು ದೂರವಿಡಿ-ಸೋಂಕಿತರನ್ನಲ್ಲ.**



ಮಾಸ್ಕ್ ಧರಿಸಿ




ದೈಹಿಕ ಅಂತರ ಪಾಲಿಸಿ



ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

12x16 cms